# ಕರ್ನಾಟಕ ಲೋಕಸೇವಾ ಆಯೋಗ

"ಉದ್ಯೋಗ ಸೌಧ" ಬೆಂಗಳೂರು-560001




## 2019-20ನೇ ಸಾಲಿನ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ಹೈದ್ರಾಬಾದ್-ಕರ್ನಾಟಕ ವೃಂದದ ಕಿರಿಯ ಸಹಾಯಕರ/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಅಧಿಸೂಚನೆ

# ಪರಿವಿಡಿ


| ಕ್ರಮ ಸಂಖ್ಯೆ | ವಿಷಯವಾರು ವಿವರ | ಪುಟ ಸಂಖ್ಯೆ |
|---|---|---|
| 1. | ಅಧಿಸೂಚಿಸಲಾದ ಹುದ್ದೆಯ ಹೆಸರು ಮತ್ತು ಅಧಿಸೂಚಿಸಲಾದ ನಿಯಮ | 3 |
| 2. | ಅಧಿಸೂಚಿಸಲಾದ ಇಲಾಖಾವಾರು ಹುದ್ದೆಗಳ ಸಂಖ್ಯೆ, ವೇತನ ಶ್ರೇಣಿ | 3-6 |
| 3. | ಅರ್ಜಿ ಸ್ವೀಕರಿಸಲು ನಿಗದಿಪಡಿಸಲಾದ ಪ್ರಾರಂಭಿಕ ದಿನಾಂಕ ಮತ್ತು ಕೊನೆಯ ದಿನಾಂಕ<br>3.1 ಪರೀಕ್ಷಾ ದಿನಾಂಕಗಳು | 6 |
| 4. | ಅರ್ಜಿ ಸಲ್ಲಿಸಲು ಅನುಸರಿಬೇಕಾದ ಕ್ರಮಗಳು<br>4.1 ಅರ್ಜಿ ಸಲ್ಲಿಕೆ<br>4.2 ಇಲಾಖಾ ಆದ್ಯತೆ<br>4.3 ಪತ್ರಿಕೆ-02ಕ್ಕೆ ಸಂಬಂಧಿಸಿದಂತೆ, ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಆಯ್ದುಕೊಳ್ಳುವ ಬಗ್ಗೆ | 7-8 |
| 5. | ಶುಲ್ಕ ಪಾವತಿ<br>ಪ್ರೋಸಸಿಂಗ್ ಚಾರ್ಜ್ 35/- ಅನ್ನು ಎಲ್ಲಾ ಅಭ್ಯರ್ಥಿಗಳು ಪಾವತಿಸಲೇಬೇಕು. ಇದನ್ನು ಪಾವತಿಸಲು ಯಾರಿಗೂ ವಿನಾಯಿತಿ ನೀಡಲಾಗಿರುವುದಿಲ್ಲ. | 9-10 |
| 6. | **ಅರ್ಹತಾ ಷರತ್ತುಗಳು:-**<br>6.1 ಪ್ರಮುಖ ಅರ್ಹತಾ ಷರತ್ತುಗಳು:-<br>6.2 ಶೈಕ್ಷಣಿಕ ವಿದ್ಯಾರ್ಹತೆ:- ಷರತ್ತುಗಳು<br>6.3 ವಯೋಮಿತಿ ಷರತ್ತುಗಳು<br>6.4 ವಯೋಮಿತಿ ಸಡಿಲಿಕೆಗಳು | 10-12 |
| 7. | 7.1 ನೇಮಕಾತಿ ವಿಧಾನಗಳು<br>7.2 ನೇಮಕಾತಿ ಪರೀಕ್ಷೆಗಳು<br>7.3 ಪಠ್ಯಕ್ರಮಗಳು | 12-15 |
| 8. | ಮೀಸಲಾತಿ ವಿವರಗಳು, ಪ್ರಮಾಣ ಪತ್ರಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು | 16-20 |
| 9. | ಸೇವಾನಿರತ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು | 20-21 |
| 10. | ಪರೀಕ್ಷಾ ಕೇಂದ್ರಗಳು | 21 |
| 11. | ಪ್ರಮುಖ ಸೂಚನೆಗಳು | 21 |
| 12. | ಸಹಾಯವಾಣಿ, ದುರ್ನಡತೆ | 22 |
| 13. | ಕಿರಿಯ ಸಹಾಯಕರು/ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ವರ್ಗೀಕರಣದ ವಿವರಗಳು | 23-28 |
| 14. | ಅನುಬಂಧ (ಅರ್ಜಿ ಸಲ್ಲಿಸುವ ವಿಧಾನ) | 29-30 |
| 15. | ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳು | 31-37 |

# ಕರ್ನಾಟಕ ಲೋಕಸೇವಾ ಆಯೋಗ

"ಉದ್ಯೋಗ ಸೌಧ'' ಬೆಂಗಳೂರು-560 001.

ಸಂಖ್ಯೆ: ಪಿಸ್ ಸಿ ಇ(3)801 /2019-20 ದಿನಾಂಕ:29-02-2020

## ಅಧಿಸೂಚನೆ

1. ಆಯೋಗವು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಲಿಪಿಕ ಹುದ್ದೆಗಳ ನೇಮಕಾತಿ ) ನಿಯಮಗಳು 1978 ರನ್ವಯ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಕೆಳಕಂಡ **ಹೈದ್ರಾಬಾದ್ – ಕರ್ನಾಟಕ ವೃಂದದ ಕಿರಿಯ ಸಹಾಯಕ/ ದ್ವಿತೀಯ ದರ್ಜೆ ಸಹಾಯಕರು** ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

2. **ಹೈದ್ರಾಬಾದ್ – ಕರ್ನಾಟಕ ವೃಂದದ ವೃಂದದ ಕಿರಿಯ ಸಹಾಯಕ/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು:-**

| ಕ್ರ. ಸಂ. | ಇಲಾಖೆಯ ಹೆಸರು | ಹೈ.ಕ. ವೃಂದದ ಹುದ್ದೆಗಳು | ಶೆಡ್ಯೂಲ್ ರನ್ವಯ ಸಹಾಯಕರು/ ಪ್ರ.ದ.ಸ. ಹುದ್ದೆಗಳಿಗೆ ಗುರುತಿಸಲಾದ ಅಂಗವೈಕಲ್ಯತೆಯ ಇಲಾಖಾವಾರು ವಿವರ | ಶೆಡ್ಯೂಲ್ ಸಂಖ್ಯೆ ಮತ್ತು ದಿನಾಂಕ |
|---|---|---|---|---|
| 1. | ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು ಕಾರಾಗೃಹಗಳ ಮಹಾನಿರೀಕ್ಷಕರು, ಕಾರಾಗೃಹಗಳ ಇಲಾಖೆ ಬೆಂಗಳೂರು | 02 | Blind/ Low vision, Hearing Impaired, Locomotor Disability, Leprosy Cured,Mentally ill | As per 2002 Schedule & Government Notification dtd. 10-06-2011 |
| 2. | ನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ಬೆಂಗಳೂರು | 17 | Blind/ Low vision, Hearing Impaired, Locomotor Disability (OA,OL,OAL,BL, CP) Leprosy Cured Mentally ill | WCD 348 PHP 2015, Dtd:26-04-2016 |
| 3. | ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು. | 01 | Blind/ Low vision, Hearing Impaired, Locomotor Disability, Leprosy Cured/ Mentally ill | As per 2002 Schedule & Government Notification No. 10-06-2011 |
| 4. | ನಿಯಂತ್ರಕರು, ಔಷಧಿ ನಿಯಂತ್ರಣ ಇಲಾಖೆ, ಬೆಂಗಳೂರು | 03 | Blind/ Low vision, Hearing Impaired, Locomotor Disability ( OL, BL,) | WCD 197 PHP 2015, Dtd:04-12-2015 |
| 5. | ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ, ಬೆಂಗಳೂರು. | 05 | Blind/ Low vision, Hearing Impaired, Locomotor Disability (OA, OL, OAL, BL, CP (MILD)) Leprosy Cured, Mentally ill | WCD 348 PHP 2015, Dtd:20-09-2016 |
| 6. | ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಬೆಂಗಳೂರು | 1 | Blind/ Low vision, Hearing Impaired, Locomotor Disability (OA, OL, OAL, CP(Mild)), Leprosy Cured/ Mentally ill. | WCD 203 PHP 2017, Dtd:13-03-2018 |

| | | | | |
|---|---|---|---|---|
| 7. | ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ (ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕಾ ನಿರ್ದೇಶನಾಲಯ ಮತ್ತು ಬೃಹತ್ ಮತ್ತು ಮೆಗಾ ಕೈಗಾರಿಕಾ ನಿರ್ದೇಶನಾಲಯ), ಬೆಂಗಳೂರು. | 3 | Blind/ Low vision, Hearing Impaired, Locomotor Disability (OA, OL, OAL, BL), Leprosy Cured | WCD 261 PHP 2015, Dtd:17-10-2015 |
| 8. | ಆಯುಕ್ತರು,ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ, ಬೆಂಗಳೂರು. | 02 | Blind/Low vision, Hearing Impaired, Locomotor Disability (OA, OL, OAL, BL & CP), Leprosy Cured, Mentally ill | WCD 348 PHP 2015, Dtd:26-04-2016 |
| 9. | ನಿರ್ದೇಶಕರು, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ,ಕಾರವಾರ. | 01 | Blind/ Low vision, Leprosy cured, Hearing Impaired, Locomotor Disability, Mentally ill | As per 2002 Schedule & Government Notification dtd. 10-06-2011 |
| 10. | ನಿರ್ದೇಶಕರು, ಕರ್ನಾಟಕ ಸರ್ಕಾರಿ ವಿಮಾ ಇಲಾಖೆ, ಬೆಂಗಳೂರು | 10 | Blind/ Low vision, Hearing Impaired, Locomotor Disability (OA, OL, OAL, BL), Leprosy Cured | WCD 261 PHP 2015, Dtd:17-10-2015 |
| 11. | ಆಯುಕ್ತರು, ನಗರಾಭಿವೃದ್ಧಿ ಇಲಾಖೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು | 25 | Blind/ Low vision, Hearing Impaired, Locomotor Disability (OA, OL, OAL, BL) | WCD 348 PHP 2015, Dtd:16-08-2016 |
| 12. | ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು. | 21 | Blind/ Low vision, Hearing Impaired, Locomotor Disability(OA,OL,OAL,BL, CP(MILD)), Leprosy Cured, Mentally ill | WCD 348 PHP 2015, Dtd:20-09-2016 |
| 13. | ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಕರ್ನಾಟಕ ರಾಜ್ಯ,ಬೆಂಗಳೂರು. | 03 | Blind/Low vision, Hearing Impaired, Locomotor Disability (OA, OL, OAL, BL), Leprosy Cured | WCD 261 PHP 2015, Dtd:17-10-2015 |
| 14. | ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ನಗರ ಜಿಲ್ಲೆ | 5 | Blind/ Low vision, Leprosy cured,Hearing Impaired, Locomotor Disability(OA,OL,OAL,BL, CP(MILD)), Mentally ill | WCD 348 PHP 2015, Dtd:14-06-2016 |
| 15. | ಮಹಾನಿರ್ದೇಶಕರು, ಎನ್.ಸಿ.ಸಿ. ನಿರ್ದೇಶನಾಲಯ (ರಾಜ್ಯ ಕೋಶ), ಬೆಂಗಳೂರು | 3 | Blind/ Low vision, Hearing Impaired, Locomotor Disability (OA, OL, OAL, BL,(CP-Mild)), Leprosy Cured/ Mentally ill | WCD 348 PHP 2015, Dtd:17-10-2016 |

| | | | | |
|---|---|---|---|---|
| 16. | ಸರ್ಕಾರದ ಕಾರ್ಯದರ್ಶಿ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು. | 21 | Blind/ Low vision, Hearing Impaired, Locomotor Disability(OA,OL,OAL,BL, CP(MILD)) ,Leprosy Cured, Mentally ill | WCD 348 PHP 2015, Dtd:20-09-2016 |
| 17. | ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು | 03 | Blind/ Low vision, Locomotor Disability, Leprosy Cured | As per 2002 Schedule & Government Notification No.10-06-2011 |
| 18. | ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು | 5 | Blind/ Low vision, Hearing Impaired, Locomotor Disability, Leprosy Cured/ Mentally ill | As per 2002 Schedule & Government Notification No. 10-06-2011 |
| 19. | ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಬೆಂಗಳೂರು. | 5 | Blind/ Low vision, Hearing Impaired, Locomotor Disability (OA, OL, OAL, BL,(CP-Mild)), Leprosy Cured/Mentally ill | WCD 348 PHP 2015, Dtd:20-09-2016 |
| 20. | ಆಯುಕ್ತರು, ಯುವ ಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು. | 02 | Blind/ Low vision, Leprosy cured,Hearing Impaired, Mentally ill Locomotor Disability | As per 2002 Schedule & Government Notification dtd. 10-06-2011 |
| 21. | ಆಯುಕ್ತರು, ಸಾರಿಗೆ ಇಲಾಖೆ, ಬೆಂಗಳೂರು | 5 | Blind/ Low vision, Hearing Impaired, Locomotor Disability (AO, OL, OAL, BL ), Leprosy Cured, | WCD 13 PHP 2014, Dtd:04-08-2015 |
| 22. | ನಿರ್ದೇಶಕರು, ಖಜಾನೆ ಇಲಾಖೆ, ಕಲಬುರ್ಗಿ ವಿಭಾಗ | 25 | Blind/ Low vision, Hearing Impaired, Locomotor Disability (OA, OL,OAL,BL), Leprosy Cured/ Mentally ill | WCD 261 PHP 2015, Dtd:20-01-2016 |
| 23. | ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು | 2 | Blind/ Low vision, Hearing Impaired, Locomotor Disability (OA, OL, OAL, BL) | WCD 13 PHP 2014, Dtd:24-09-2015 |
| 24. | ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು. | 1 | Blind/ Low vision, Leprosy cured(S.D.A.), Hearing Impaired, Locomotor Disability, Mentaly ill. | As per 2002 Schedule & Government Notification dtd. 10-06-2011 |
| 25. | ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರ್ ಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, ಬೆಂಗಳೂರು. | 5 | Blind/ Low vision, Leprosy cured, Hearing Impaired, Locomotor Disability, Mentaly ill. | As per 2002 Schedule & Government Notification dtd. 10-06-2011 |
| 26. | ನಿಯಂತ್ರಕರು, ಕಾನೂನು ಮಾಪನ ಶಾಸ್ತ್ರ ಇಲಾಖೆ, ಬೆಂಗಳೂರು. | 1 | Blind/ Low vision, Leprosy cured, Hearing Impaired, Locomotor Disability, Mentaly ill. | As per 2002 Schedule & Government Notification dtd. 10-06-2011 |

| | | | | |
|---|---|---|---|---|
| 27. | ಆಯುಕ್ತರು, ಆಯುಷ್ ಇಲಾಖೆ, ಬೆಂಗಳೂರು. | 07 | Blind/ Low vision, Hearing Impaired, Locomotor Disability (OA, OL, OAL, BL, CP ) Leprosy Cured, Mentally ill | WCD 348 PHP 2015, Dtd:26-04-2016 |
| 28. | ಆಯುಕ್ತರು, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು. | 02 | Blind/ Low vision, Hearing Impaired, Locomotor Disability (OA, OL, OAL, BL, CP (Mild) ) Leprosy Cured, Mentally ill | WCD 348 PHP 2015, Dtd:14-06-2016 |
| 29. | ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, (ತರಬೇತಿ ವಿಭಾಗ), ಬೆಂಗಳೂರು | 13 | Blind/ Low vision, Leprosy Cured, Mentally ill, Hearing Impaired, Locomotor Disability (OA, OL, OAL, BL), Mentally ill | WCD 261 PHP 2015, Dtd:20-01-2016 |
| | ಒಟ್ಟು | **199** | | |

- ನೇಮಕಾತಿ ಪ್ರಾಧಿಕಾರಿಗಳು ದೃಢೀಕರಿಸಿ ನೀಡಿರುವ ಹುದ್ದೆಗಳ ವರ್ಗೀಕರಣದನ್ವಯ ಇಲಾಖಾವಾರು ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.
- ದಿನಾಂಕ: 29-11-2002ರ ಶೆಡ್ಯೂಲ್, ದಿನಾಂಕ: 10-06-2011ರ ಮತ್ತು ದಿನಾಂಕ: 13-03-2015ರ ಸರ್ಕಾರದ ಅಧಿಸೂಚನೆಗಳನ್ವಯ ಕಿರಿಯ ಸಹಾಯಕರು/ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಗುರುತಿಸಲಾದ ವಿವಿಧ ಅಂಗವೈಕಲ್ಯತೆಯ ವಿವರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಮಾತ್ರ ತೋರಿಸಲಾಗಿದ್ದು, ರೋಸ್ಟರ್ ನಿಯಮಗಳನ್ವಯ ಅಧಿಸೂಚಿಸಲಾದ ಹುದ್ದೆಗಳ ಮತ್ತು ಸದರಿ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಅಂಗವಿಕಲ ಹುದ್ದೆಗಳ ವಿವರಗಳನ್ನು ಹುದ್ದೆಗಳ ವರ್ಗೀಕರಣದಲ್ಲಿ ತೋರಿಸಲಾಗಿದೆ.

## 2.1 ವೇತನ ಶ್ರೇಣಿ:

| | |
|---|---|
| ಕಿರಿಯ ಸಹಾಯಕರ / ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ: | ರೂ. 21400-500-22400-550-24600-600-27000-650-29600-750-32600-850-36000-950-39800-1100-42000/- |

**ಪಿಂಚಣಿ ಸೌಲಭ್ಯ:** ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ (ಎಸ್ ಪಿ ಎಲ್) 04 ಪಿಇಟಿ 2005, ದಿನಾಂಕ: 31-03-2006 ಮತ್ತು ಅದರ ತಿದ್ದುಪಡಿಗಳನ್ವಯ.

- **ಸೂಚನೆ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ನಗರ ಸ್ಥಳೀಯ ಸಂಸ್ಥೆಯಾಗಿರುವುದರಿಂದ, ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ಸದರಿಯವರುಗಳಿಗೆ ಕೆ.ಜಿ.ಐ.ಡಿ., ಜಿ.ಪಿ.ಎಫ್., ಸಮೂಹ ವಿಮೆಗಳು ಲಭ್ಯವಿರುವುದಿಲ್ಲವೆಂದು ತಿಳಿಸಿರುತ್ತಾರೆ.**

## 3. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು

| ಪ್ರಾರಂಭಿಕ ದಿನಾಂಕ | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ಶುಲ್ಕ ಪಾವತಿಸಲು ಕೊನೆಯ ದಿನಾಂಕ |
|---|---|---|
| **09.03.2020** | **09.04.2020** | **13.04.2020** |

## 3.1 ಪರೀಕ್ಷಾ ದಿನಾಂಕಗಳು:

| ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ದಿನಾಂಕ | ಸ್ಪರ್ಧಾತ್ಮಕ ಪರೀಕ್ಷೆ ದಿನಾಂಕ |
|---|---|

| 06.06.2020 | 07.06.2020 |
|---|---|

4. ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ಯಾವುದೇ ಕಾಮನ್ ಸರ್ವೀಸ್ ಸೆಂಟರ್ ಗಳಲ್ಲಿ (CSC) ಅಥವಾ ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್ ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದೇ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ /ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಶುಲ್ಕವನ್ನು ಕಾಮನ್ ಸರ್ವೀಸ್ ಸೆಂಟರ್ ಗಳಲ್ಲಿ (CSC) ಪಾವತಿಸಲು ಅವಕಾಶ ನೀಡಲಾಗಿರುವುದರಿಂದ ಅರ್ಜಿಗಳನ್ನು ಇಲ್ಲಿಯೂ ಸಹ ಸಲ್ಲಿಸಬಹುದಾಗಿದೆ.

## 4.1 ಅರ್ಜಿ ಸಲ್ಲಿಸುವ ಪ್ರಕ್ರಿಯೆ:-

- ಆಯೋಗದ ಅಂತರ್ಜಾಲ www.kpsc.kar.nic.in ಅನ್ನು ಬಳಸಿಕೊಂಡು ಅದರಲ್ಲಿನ ಸೂಚನೆಗಳನ್ನು ಪಾಲಿಸಿಕೊಂಡು ಅರ್ಜಿ ಸಲ್ಲಿಸುವುದು.
- ಅರ್ಜಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ಮೂರು ಹಂತಗಳು ಇದೆ.
  - ➢ ಮೊದಲನೇ ಹಂತ: Profile Creation/Updation
  - ➢ ಎರಡನೇ ಹಂತ : Application Submission
  - ➢ ಮೂರನೇ ಹಂತ : Fees Payment

ವಿವರವಾದ ಹಂತಗಳು:

{ '*' Marks are mandatory/ ಗುರುತು ಇರುವ ಅಂಕಣಗಳು ಕಡ್ಡಾಯವಾಗಿ ಭರ್ತಿ ಮಾಡಬೇಕು) if nor response found on Save/Add button kindly refresh page (press control+F5)}

- ಹೊಸದಾಗಿ Applicaton Link ರಲ್ಲಿ log in ಆಗಲು user name ಮತ್ತು password ಅನ್ನು ಸೃಷ್ಟಿಸಬೇಕು.
- Application Link ರಲ್ಲಿ log in ಆದ ನಂತರ ನಿಮ್ಮ ಪೂರ್ಣ profile ಅನ್ನು ಭರ್ತಿ ಮಾಡಿ, ಅಪ್ಲೋಡ್ ಮಾಡಬೇಕಾದ ಭಾವಚಿತ್ರ ಮತ್ತು ಸಹಿ ಸ್ಕ್ಯಾನ ಪ್ರತಿಗಳನ್ನು jpg ನಮೂನೆಯಲ್ಲಿ ಸಿದ್ಧವಾಗಿರಬೇಕು ಹಾಗೂ 50 kb ಗಿಂತ ಹೆಚ್ಚಾಗಿರಬಾರದು.
- ಅಧಿಸೂಚನೆ ಎದುರು ಇರುವ " Click here to Apply" Link ಅನ್ನು ಒತ್ತಿ.
- ನಿಮ್ಮ profile ರಲ್ಲಿ ಲಭ್ಯವಿರುವ ಮಾಹಿತಿಯು ನಿಮ್ಮ ಅರ್ಜಿ ನಮೂನೆಯಲ್ಲಿ ಪ್ರಕಟವಾಗುತ್ತದೆ. ಅರ್ಜಿಯಲ್ಲಿ ಬಾಕಿ ಉಳಿದಿರುವ ಮಾಹಿತಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು.
- ಅರ್ಜಿ ಸಲ್ಲಿಸಿದ ನಂತರ " My Application" link ರಲ್ಲಿ ನೀವು ಅರ್ಜಿ ಸಲ್ಲಿಸಿರುವ ಅಧಿಸೂಚನೆಯನ್ನು ಆಯ್ಕೆ ಮಾಡಿದಲ್ಲಿ ಕೆಳಗೆ ನಿಮ್ಮ ಅರ್ಜಿಯು ಪ್ರಕಟವಾಗುತ್ತದೆ.
- ಅರ್ಜಿಯ ಪಕ್ಕದಲ್ಲಿ "Pay Now" link ಅನ್ನು ಒತ್ತಿದಲ್ಲಿ " Online Payment" ಆಯ್ಕೆಗಳು ಮೂಡುತ್ತವೆ.
- ಒಂದು ಬಾರಿ ನೋಂದಣಿ/ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಸಹಾಯವಾಣಿ ಸಂಖ್ಯೆ: 7406086807 / 7406086801 ಯನ್ನು ಸಂಪರ್ಕಿಸಲು ಸೂಚಿಸಿದೆ.

## 4.2 ಇಲಾಖಾ ಆದ್ಯತೆಗಳು :-

- ಅಭ್ಯರ್ಥಿಗಳು ಅರ್ಜಿಯಲ್ಲಿ ಕಡ್ಡಾಯವಾಗಿ ಅಧಿಸೂಚಿಸಿದ ಇಲಾಖೆಗಳಲ್ಲಿ ತಮ್ಮ ಇಲಾಖಾ ಆದ್ಯತೆಗಳನ್ನು ನಮೂದಿಸಬೇಕು. ತಪ್ಪಿದಲ್ಲಿ ಸರ್ಕಾರದ ದಿನಾಂಕ: 05-09-2015ರ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವೆಗಳು (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು 1978 ಉಪನಿಯಮ 1978 ಉಪನಿಯಮ (2) (Second Amendment) Rules 2015 ರಲ್ಲಿ "The candidates who apply for the competitive examinations shall clearly indicate in their application forms the services or posts for which they wish to be considered for appointment in the order of preference. If the candidate does not prefer any service or post he may be considered for remaining unpreferred vacant post or service" ಎಂದು ನಿರ್ದಿಷ್ಟಪಡಿಸಿದ್ದು, ಅದೇಶವಂತೆ ಆಯೋಗವೇ ಕ್ರಮಕೈಗೊಳ್ಳಲಾಗುವುದು.
- ಇಲಾಖಾ ಆದ್ಯತೆಗಳನ್ನು ಕೇವಲ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವ ಸಮಯದಲ್ಲಿ ಮಾತ್ರ ಸಲ್ಲಿಸತಕ್ಕದ್ದು, ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲಾಗುವ ಯಾವುದೇ ಇಲಾಖಾ ಆದ್ಯತೆಗಳನ್ನು ಪರಿಗಣಿಸಲಾಗುವುದಿಲ್ಲ.
- ಆನ್-ಲೈನ್ ಮೂಲಕ ಒಮ್ಮೆ ಸಲ್ಲಿಸಲಾದ ಇಲಾಖಾ ಆದ್ಯತೆಗಳನ್ನು ಯಾವುದೇ ಕಾರಣಕ್ಕೂ ಬದಲಾಯಿಸಲು/ಮಾರ್ಪಡಿಸಲು ಅವಕಾಶವಿರುವುದಿಲ್ಲ. ಮತ್ತು ಬದಲಾವಣೆಗೆ ಸಲ್ಲಿಸಲಾಗುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. ಆದ್ದರಿಂದ, ಅಭ್ಯರ್ಥಿಗಳು ಆದಷ್ಟು ಜಾಗ್ರುತೆಯಿಂದ ಖುದ್ದಾಗಿ ಇಲಾಖಾ ಆದ್ಯತೆಗಳನ್ನು ಭರ್ತಿ ಮಾಡಬೇಕು.

## 4.3. ಸ್ಪರ್ದಾತ್ಮಕ ಪರೀಕ್ಷೆಯ ಪತ್ರಿಕೆ-02ಕ್ಕೆ ಸಂಬಂಧಿಸಿದಂತೆ, ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಆಯ್ದುಕೊಳ್ಳುವ ಬಗ್ಗೆ

- ಸ್ಪರ್ದಾತ್ಮಕ ಪರೀಕ್ಷೆಯ ಪತ್ರಿಕೆ-2 ರ ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಇವುಗಳಲ್ಲಿ ಯಾವುದಾದರೂ ಒಂದಕ್ಕೆ ಮಾತ್ರ ಉತ್ತರಿಸಬೇಕಾಗಿರುವುದರಿಂದ, ಅಭ್ಯರ್ಥಿಗಳು ಪರೀಕ್ಷಾ ಸಮಯದಲ್ಲಿ ಕಡ್ಡಾಯವಾಗಿ ಮತ್ತು ಜಾಗರೂಕರಾಗಿ ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ವಿಷಯವನ್ನು ಓ.ಎಂ.ಆರ್. ಹಾಳೆಯಲ್ಲಿ ನಮೂದಿಸಬೇಕು. ಒಂದು ವೇಳೆ ನಮೂದಿಸದಿದ್ದಲ್ಲಿ ಓ.ಎಂ.ಆರ್. ಹಾಳೆಯನ್ನು ಅಸಿಂಧು(Invalid) ಗೊಳಿಸಲಾಗುವುದು.
- ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಇವುಗಳಲ್ಲಿ ಯಾವುದಾದರೂ ಒಂದನ್ನು ಆಯ್ದುಕೊಂಡು ಪ್ರಶ್ನೆಪತ್ರಿಕೆಯನ್ನು ಉತ್ತರಿಸಬೇಕು. ನಂತರದಲ್ಲಿ ಯಾವುದೇ ಕಾರಣಕ್ಕೂ ಬದಲಾವಣೆಗೆ ಅವಕಾಶವಿರುವುದಿಲ್ಲ.

## ವಿಶೇಷ ಸೂಚನೆ:

- Online ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು. ಯಾವುದೇ ಕಾರಣಕ್ಕೂ ಆಯೋಗದಿಂದ ಅರ್ಜಿಯ ನಕಲು ಪ್ರತಿ ಪಡೆಯಲು ಅವಕಾಶ ಇರುವುದಿಲ್ಲ.
- ಆನ್-ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ. ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿಯಾಗಲಿ ನ್ಯೂನ್ಯತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು ಅಭ್ಯರ್ಥಿಗಳು ನೀಡಿರುವ ಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, ಅವರ 'Profile creation/ರುಜುವಾತುಗಳು ಸೃಷ್ಟಿಸುವ ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತ ಹಂತವಾಗಿ ಓದಿಕೊಳ್ಳತಕ್ಕದ್ದು. ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

## 5. ಶುಲ್ಕ:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.600 + ಪ್ರೋಸಸಿಂಗ್ ಚಾರ್ಜ್ 35/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300 + ಪ್ರೋಸಸಿಂಗ್ ಚಾರ್ಜ್ 35/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ (ಸಾಮಾನ್ಯ ಅರ್ಹತೆ ಮತ್ತು ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದವರಿಗೆ ) | ರೂ. 50 + ಪ್ರೋಸಸಿಂಗ್ ಚಾರ್ಜ್ 35/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ,ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. ಆದರೆ, ಪ್ರೋಸಸಿಂಗ್ ಚಾರ್ಜ್ 35/- ಅನ್ನು ಎಲ್ಲಾ ಅಭ್ಯರ್ಥಿಗಳು ಪಾವತಿಸಲೇಬೇಕು. ಇದನ್ನು ಪಾವತಿಸಲು ಯಾರಿಗೂ ವಿನಾಯಿತಿ ನೀಡಲಾಗಿರುವುದಿಲ್ಲ. |

- ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಪರೀಕ್ಷಾ ಶುಲ್ಕವನ್ನು ನೆಟ್ ಬ್ಯಾಂಕಿಂಗ್/ಡೆಬಿಟ್ ಕಾರ್ಡ್ /ಕ್ರೆಡಿಟ್ ಪಾವತಿ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದೇ ಹಾಗೂ ದಾಖಲೆಗಳನ್ನು/ಭಾವಚಿತ್ರ/ಸಹಿಯನ್ನು ಅಪ್ಲೋಡ್ ಮಾಡದೇ ಇರುವ / ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆ, ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಂಡು ಅದರಂತೆ, ಭರ್ತಿ ಮಾಡತಕ್ಕದ್ದು.
- ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಧಾರ್ ಕಾರ್ಡ್ ಸಂಖ್ಯೆ, ಚಾಲ್ತಿಯಲ್ಲಿರುವ ಇ-ಮೇಲ್ (e-mail) ವಿಳಾಸ/ ಮೊಬೈಲ್ ಸಂಖ್ಯೆ ಕಡ್ಡಾಯವಾಗಿ ನಮೂದಿಸಲು ಸೂಚಿಸಿದೆ. ನೇಮಕಾತಿ ಪ್ರಕ್ರಿಯೆ ಮುಗಿಯುವವರೆವಿಗೂ ಇದೇ ಇ-ಮೇಲ್ (e-mail) ವಿಳಾಸ/ ಮೊಬೈಲ್ ಸಂಖ್ಯೆಯನ್ನೇ ಆಯೋಗದ ವ್ಯವಹಾರಗಳಿಗೆ ಪರಿಗಣಿಸಲಾಗುವುದರಿಂದ, ಇದನ್ನು ಸುಭದ್ರವಾಗಿಟ್ಟುಕೊಳ್ಳಬೇಕೆಂದು ಮತ್ತು ಇದನ್ನು ಬದಲಾಯಿಸಲು ಅವಕಾಶ ನೀಡಲಾಗುವುದಿಲ್ಲ.
- ಸ್ಪರ್ಧಾತ್ಮಕ ಪರೀಕ್ಷೆಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ಕಳುಹಿಸಲಾಗುವುದಿಲ್ಲ. ಆಯೋಗದ ಅಂತರ್ಜಾಲದಿಂದ ಡೌನ್ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಿ ಪತ್ರಿಕಾ ಪ್ರಕಟಣೆ ಹೊರಡಿಸಲಾಗುವುದು. ಆಗ ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಡೌನ್ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೆ ಭದ್ರವಾಗಿಟ್ಟುಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೆ ಈ ಪ್ರವೇಶ ಪತ್ರದ ನಕಲು ಪ್ರತಿ ಪಡೆಯಲು ಅವಕಾಶ ಇರುವುದಿಲ್ಲ.
- ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್/ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ .
- ಆಯೋಗವು ಪರೀಕ್ಷಾ ವೇಳಾಪಟ್ಟಿ, ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಳ್ಳುವ ಮತ್ತು ಇತರೆ ಮಾಹಿತಿಗಳ ಬಗ್ಗೆ ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in ನಲ್ಲಿ ಪ್ರಕಟಿಸಲಾಗುವುದರಿಂದ, ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರವ್ಯವಹಾರ ನಡೆಸುವುದಿಲ್ಲ. ಆದ್ದರಿಂದ, ಅಭ್ಯರ್ಥಿಗಳು ಆಗಿಂದ್ದಾಗೆ ಆಯೋಗದ ಅಂತರ್ಜಾಲವನ್ನು ವೀಕ್ಷಿಸಲು ಈ ಮೂಲಕ ಸೂಚಿಸಿದೆ.
- ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಅರ್ಜಿ ಭರ್ತಿ ಮಾಡಲು ಆನ್ ಲೈನ್ ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು. ಒಂದು ವೇಳೆ ತಪ್ಪು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಆಯೋಗವು ಕಾನೂನಿನನ್ವಯ ನೇಮಕಾತಿಯ ಯಾವ ಹಂತದಲ್ಲಿಯಾದರೂ ಸೂಕ್ತ ಕ್ರಮಕೈಗೊಳ್ಳುವುದು ಹಾಗೂ ಅರ್ಜಿಯನ್ನು ತಿರಸ್ಕರಿಸಲಾಗುವುದು

- ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ.-1 | ಪ್ರವರ್ಗ-1 | Cat–1 | Category – I |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಯೋ.ಅ. | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಹೈ.ಕ. | ಹೈದ್ರಾಬಾದ್ – ಕರ್ನಾಟಕ ವೃಂದದ | HK | Hyderabad Karnata Cader |

## 6. ಅರ್ಹತಾ ಷರತ್ತುಗಳು:- ಪ್ರಮುಖ ಅರ್ಹತಾ ಷರತ್ತುಗಳು/ ಶೈಕ್ಷಣಿಕ ವಿದ್ಯಾರ್ಹತೆ/ ವಯೋಮಿತಿ/ ವಯೋಮಿತಿ ಸಡಿಲಿಕೆಗಳು :-

### 6.1 ಅರ್ಹತಾ ಷರತ್ತುಗಳು:-

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

ಊ) ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು, ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ, ನೇಮಕಾತಿಗೆ ಅರ್ಹರಾಗುವುದಿಲ್ಲ.

## 6.2 ಶೈಕ್ಷಣಿಕ ವಿದ್ಯಾರ್ಹತೆ:-

ಪಿ.ಯು.ಸಿ / ತತ್ಸಮಾನ ವಿದ್ಯಾರ್ಹತೆ

ಸರ್ಕಾರಿ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರನ್ವಯ

**ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು**

1. ಸಿ.ಬಿ.ಎಸ್.ಇ. ಮತ್ತು ಐ.ಎಸ್.ಸಿ. ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.
2. ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.
3. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್.) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ ಹೆಚ್.ಎಸ್.ಸಿ..
4. ಮೂರು ವರ್ಷಗಳ ಡಿಪ್ಲೊ ಾ ಅಥವಾ ಎರಡು ವರ್ಷಗಳ ಐ.ಟಿ.ಐ. ಕೋರ್ಸ್ ಅಥವಾ ಎರಡು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ (ಜೆ.ಓ.ಸಿ/ ಜೆ.ಓ.ಡಿ.ಸಿ/ ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು ಎನ್.ಐ.ಓ.ಎಸ್. ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸಬಹುದು.

**ಟಿಪ್ಪಣಿ:**

- ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ನಿಗದಿತ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.
- ವಿದ್ಯಾರ್ಹತೆಗೆ ಸಂಬಂಧಿಸಿದಂತೆ, ಅಂಕಪಟ್ಟಿ/ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳಾಗಿದ್ದು, ಮೂಲದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಕಡ್ಡಾಯವಾಗಿ ಮೂಲ ಪತ್ರವನ್ನು ಹಾಜರುಪಡಿಸಬೇಕು. ಒಂದುವೇಳೆ ಹಾಜರು ಪಡಿಸದಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

## 6.3 ವಯೋಮಿತಿ:-

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

| | |
|---|---|
| **ಕನಿಷ್ಠ** | 18 ವರ್ಷ |
| **ಗರಿಷ್ಠ:**<br>ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷಗಳು |
| ಪ್ರವರ್ಗ 2ಎ/2ಬಿ/3ಎ/3ಬಿ ಅಭ್ಯರ್ಥಿಗಳಿಗೆ | 38 ವರ್ಷಗಳು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1 ಅಭ್ಯರ್ಥಿಗಳಿಗೆ | 40 ವರ್ಷಗಳು |

- ಜನ್ಮ ದಿನಾಂಕಕ್ಕೆ ಸಂಬಂಧಿಸಿದಂತೆ, ಜನ್ಮ ದಿನಾಂಕ ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ /ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉಧೃತ ಭಾಗ (Extract of cumulative record) ಗಳನ್ನು ಸಲ್ಲಿಸಬೇಕು.

- ಜನ್ಮ ದಿನಾಂಕ ಪ್ರಮಾಣ ಪತ್ರವು ಕಡ್ಡಾಯವಾಗಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರವಾಗಿದ್ದು, ಮೂಲದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಕಡ್ಡಾಯವಾಗಿ ಮೂಲ ಪತ್ರವನ್ನು ಹಾಜರುಪಡಿಸಬೇಕು. ಒಂದುವೇಳೆ ಹಾಜರು ಪಡಿಸದಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

## 6.4 ವಯೋಮಿತಿ ಸಡಿಲಿಕೆಗಳು:-

| ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ. | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| (ಆ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. |
| (ಇ) | ನ್ಯಾಷನಲ್ ಕ್ಯಾಡೆಟ್ ಕೋರ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ. | ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು. |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ. | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು. |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ. | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| (ಋ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| (ಎ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1975ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

## 7. ನೇಮಕಾತಿ ವಿಧಾನ:-

- ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು(ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು , 1978ರನ್ವಯ ಅಭ್ಯರ್ಥಿಗಳು ಆಯೋಗವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಮೆರಿಟ್ ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಹಾಗೂ ನೀಡಿರುವ ಆದ್ಯತೆಯನ್ವಯ ಪ್ರಕಟಿಸಿರುವ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಆಯ್ಕೆ ಪಟ್ಟಿ ತಯಾರಿಸಲಾಗುವುದು.
- ಅಭ್ಯರ್ಥಿಗಳು ಅರ್ಜಿಯಲ್ಲಿ ಕಡ್ಡಾಯವಾಗಿ ಅಧಿಸೂಚಿಸಿದ ಇಲಾಖೆಗಳಲ್ಲಿ ತಮ್ಮ ಇಲಾಖಾ ಆದ್ಯತೆಗಳನ್ನು ನಮೂದಿಸಬೇಕು. ತಪ್ಪಿದಲ್ಲಿ ಸರ್ಕಾರದ ದಿನಾಂಕ: 05-09-2015ರ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವೆಗಳು (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು 1978 ಉಪನಿಯಮ 1978 ಉಪನಿಯಮ (2) (Second Amendment) Rules 2015 ರಲ್ಲಿ "The candidates who apply for the competitive examinations shall clearly indicate in their application forms the services or posts for which they wish to be considered for appointment in the order of preference. If the candidate does not prefer any service or post he may be considered for remaining unpreferred vacant post or service" ಎಂದು ನಿರ್ದಿಷ್ಟಪಡಿಸಿದ್ದು, ಅದೇಶವಂತೆ ಆಯೋಗವೇ ಕ್ರಮಕೈಗೊಳ್ಳಲಾಗುವುದು.

## 7.1 ಸ್ಪರ್ಧಾತ್ಮಕ ಪರೀಕ್ಷೆಗಳು:

ಮೇಲ್ಕಂಡ ನಿಯಮಗಳನುಸಾರ ಸ್ಪರ್ಧಾತ್ಮಕ ಪರೀಕ್ಷೆಗಳು ವಿವರಣಾತ್ಮಕ ಮತ್ತು ವಸ್ತು ನಿಷ್ಠ ಬಹು ಆಯ್ಕೆ ಮಾದರಿಯ ಈ ಕೆಳಕಂಡ ಮೂರು ಪತ್ರಿಕೆಗಳನ್ನು ಹೊಂದಿರುತ್ತದೆ..

| ಪತ್ರಿಕೆ | ವಿಷಯ | ನಿಗದಿಪಡಿಸಿದ ಅಂಕಗಳು | ಪರೀಕ್ಷಾ ಅವಧಿ | ಪರೀಕ್ಷಾ ವಿಧಾನ |
|---|---|---|---|---|
| ಪತ್ರಿಕೆ-1 | ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ | 150 | 1 ½ ಗಂಟೆಗಳು | ವಿವರಣಾತ್ಮಕ ಪತ್ರಿಕೆ/ Descriptive Type |
| ಪತ್ರಿಕೆ-2 | ಸಾಮಾನ್ಯ ಕನ್ನಡ / ಸಾಮಾನ್ಯ ಇಂಗ್ಲಿಷ್ | 100 | 1 ½ ಗಂಟೆಗಳು | ವಸ್ತು ನಿಷ್ಠ ಬಹು ಆಯ್ಕೆ ಮಾದರಿ/ Objective Multiple Choice Type |
| ಪತ್ರಿಕೆ-3 | ಸಾಮಾನ್ಯ ಜ್ಞಾನ | 100 | 1 ½ ಗಂಟೆಗಳು | ವಸ್ತು ನಿಷ್ಠ ಬಹು ಆಯ್ಕೆ ಮಾದರಿ/ Objective Multiple Choice Type |

- ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆ-2 ರ ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲಿಷ್ ಇವುಗಳಲ್ಲಿ ಯಾವುದಾದರೂ ಒಂದಕ್ಕೆ ಮಾತ್ರ ಉತ್ತರಿಸಬೇಕಾಗಿರುವುದರಿಂದ, ಅಭ್ಯರ್ಥಿಗಳು ಪರೀಕ್ಷಾ ಸಮಯದಲ್ಲಿ ಕಡ್ಡಾಯವಾಗಿ ಮತ್ತು ಜಾಗರೂಕರಾಗಿ ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ವಿಷಯವನ್ನು ಓ.ಎಂ.ಆರ್. ಹಾಳೆಯಲ್ಲಿ ನಮೂದಿಸಬೇಕು. ಒಂದು ವೇಳೆ ನಮೂದಿಸದಿದ್ದಲ್ಲಿ ಓ.ಎಂ.ಆರ್. ಹಾಳೆಯನ್ನು ಅಸಿಂಧು(Invalid) ಗೊಳಿಸಲಾಗುವುದು.
- ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲಿಷ್ ಇವುಗಳಲ್ಲಿ ಯಾವುದಾದರೂ ಒಂದನ್ನು ಆಯ್ದುಕೊಂಡು ಪ್ರಶ್ನೆಪತ್ರಿಕೆಯನ್ನು ಉತ್ತರಿಸಬೇಕು. ನಂತರದಲ್ಲಿ ಯಾವುದೇ ಕಾರಣಕ್ಕೂ ಬದಲಾವಣೆಗೆ ಅವಕಾಶವಿರುವುದಿಲ್ಲ.

**ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ:**

- ಈ ಹುದ್ದೆಗಳ ಆಯ್ಕೆಗೆ ಅರ್ಹರಾಗಲು ಅಭ್ಯರ್ಥಿಗಳು ಆಯೋಗ ನಡೆಸುವ ಎಸ್.ಎಸ್.ಎಲ್.ಸಿ.ಯ ಕನ್ನಡ ಪ್ರಥಮ ಭಾಷೆಯ ಮಟ್ಟದ 150 ಅಂಕಗಳ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳೊಂದಿಗೆ ಕಡ್ಡಾಯವಾಗಿ ತೇರ್ಗಡೆ ಹೊಂದಲೇಬೇಕು. ನಿಗದಿಪಡಿಸಿದ ಕನಿಷ್ಠ 50 ಅಂಕಗಳನ್ನು ಪಡೆಯದ ಅಭ್ಯರ್ಥಿಗಳು ಆಯ್ಕೆಗೆ ಅರ್ಹರಾಗುವುದಿಲ್ಲ ಹಾಗೂ ಈ ಕನ್ನಡ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ. ಆದರೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ವಿನಾಯಿತಿ ಬಗ್ಗೆ ಕೆಳಕಂಡ ಷರತ್ತುಗಳನ್ನು ಸೇರ್ಪಡಿಸಲಾಗಿರುತ್ತದೆ.
- ``ಎಸ್.ಎಸ್.ಎಲ್.ಸಿ. ಅಥವಾ ಇದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ. ಪರೀಕ್ಷೆಗಿಂತ ಮೇಲ್ಮಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ, ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕಸೇವಾ ಆಯೋಗದಿಂದ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು, ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ".
- ಸರ್ಕಾರದ ಪತ್ರ ಸಂಖ್ಯೆ ಸಿಆಸುಇ 39 ಸೇವನೆ 2018 ದಿನಾಂಕ 17-04-2018 ರ ಸ್ಪಷ್ಟೀಕರಣದನ್ವಯ ಅಭ್ಯರ್ಥಿಗಳು ಒಂದು ಬಾರಿ ಆಯೋಗವು ನಡೆಸುವ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ (ಸದರಿ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯ ಪಠ್ಯಕ್ರಮದ ಮಾದರಿಯಲ್ಲಿಯೇ) ಉತ್ತೀರ್ಣರಾದಲ್ಲಿ ಮತ್ತೊಮ್ಮೆ ಇತರೆ ಹುದ್ದೆಗಳಿಗಾಗಿ ಆಯೋಗವು ನಡೆಸುವ ಕಡ್ಡಾಯ ಕನ್ನಡ ಪರೀಕ್ಷೆಯನ್ನು ತೆಗೆದು ಕೊಳ್ಳುವುದರಿಂದ ವಿನಾಯಿತಿ ನೀಡಲಾಗಿದೆ.3

**ವಿಶೇಷ ಸೂಚನೆ:-**

(1) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಅಭ್ಯಸಿಸಿದ್ದಲ್ಲಿ ಅಥವಾ ಇತರೆ ಕನ್ನಡ ಭಾಷಾ ಪರೀಕ್ಷೆಗಳಲ್ಲಿ / ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದಂತಹ ಅಭ್ಯರ್ಥಿಗಳಿಗೆ ಈ ಮೇಲಿನ ವಿನಾಯಿತಿ ಪಡೆಯಲು ಅವಕಾಶ ಇರುವುದಿಲ್ಲ. ಆದುದರಿಂದ, ಇವರು ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಕಡ್ಡಾಯವಾಗಿ ತೆಗೆದುಕೊಳ್ಳಲೇ ಬೇಕಿರುತ್ತದೆ.

(2) ಸದರಿ ಅಧಿಸೂಚನೆಗೆ ಅನುಗುಣವಾಗಿ ನಡೆಯಲಾಗುವ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಿಂದ ವಿನಾಯಿತಿ ಇಲ್ಲದ ಅಭ್ಯರ್ಥಿಗಳಿಗೆ, ಅವರು ಈ ಪರೀಕ್ಷೆಯನ್ನು ನಡೆಸುವ ಮೊದಲು ಆಯೋಗವು ನಡೆಸಿದ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ಉತ್ತೀರ್ಣತೆ ಹೊಂದಿದ್ದಲ್ಲಿ ವಿನಾಯಿತಿ ನೀಡಲಾಗುವುದು.

(3) ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ಪಡೆಯಲು ಅರ್ಜಿಯ ನಿಗದಿತ ಸ್ಥಳದಲ್ಲಿ ವಿವರಗಳನ್ನು ನೀಡತಕ್ಕದ್ದು. ಸರಿಯಾದ ಮಾಹಿತಿ ಒದಗಿಸದಿದ್ದಲ್ಲಿ ಮೇಲಿನ ವಿನಾಯಿತಿಗಳನ್ನು ಪಡೆಯಲು ಅರ್ಹತೆ ನೀಡುವುದಿಲ್ಲ. ಹಾಗೂ ವಿನಾಯಿತಿ ಪಡೆಯಲು ತಪ್ಪಾಗಿ ಮಾಹಿತಿ ನೀಡಿದ ಅಭ್ಯರ್ಥಿಗಳನ್ನು ಅನರ್ಹಗೊಳಿಸಲಾಗುವುದು. ಮುಂದುವರೆದು, ಅರ್ಜಿಯಲ್ಲಿ ಈ ಮಾಹಿತಿಯನ್ನು ತಪ್ಪಾಗಿ ನೀಡಿದ ನಂತರ ಇದನ್ನು ಸರಿಪಡಿಸಿಕೊಳ್ಳಲು ಅವಕಾಶ ನೀಡಲಾಗುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಎಲ್ಲಾ ವಿಷಯಗಳನ್ನು ಪರಿಶೀಲಿಸಿ, ಸರಿಯಾಗಿರುವ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಒಪ್ಪಿಗೆಯನ್ನು ನೀಡಬೇಕೆಂದು ಸೂಚಿಸಿದೆ.

(4) ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳನ್ನು ಗಳಿಸದ ಅಭ್ಯರ್ಥಿಗಳ ಸಾಮಾನ್ಯ ಕನ್ನಡ/ಸಾಮಾನ್ಯ ಇಂಗ್ಲಿಷ್ ಮತ್ತು ಸಾಮಾನ್ಯ ಜ್ಞಾನ ಪತ್ರಿಕೆಯ ಉತ್ತರ ಪುಸ್ತಿಕೆಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ

## 7.2 ಪರೀಕ್ಷೆಗಳ ಪಠ್ಯಕ್ರಮಗಳು:-

- **ಪತ್ರಿಕೆ-1ರ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗೆ ಪಠ್ಯಕ್ರಮ**

(ಎಸ್.ಎಸ್.ಎಲ್.ಸಿ ಪರೀಕ್ಷೆಯ ಕನ್ನಡ ಪ್ರಥಮ ಭಾಷೆಯ ಮಟ್ಟದ ವಿವರಣಾತ್ಮಕ ಪತ್ರಿಕೆ)

| ಕ್ರ ಸಂ. | ಪಠ್ಯ ಕ್ರಮ | ಅಂಕಗಳು |
|---|---|---|
| 1 | ವಿಷಯದ ಸಮಗ್ರ ಅರ್ಥೈಸುವಿಕೆ | 25 |
| 2 | ಪದ ಪ್ರಯೋಗ | 25 |
| 3 | ವಿಷಯ ಸಂಕ್ಷೇಪಣೆ | 25 |
| 4 | ಪದ ಜ್ಞಾನ | 25 |
| 5 | ಲಘು ಪ್ರಬಂಧ | 25 |
| 6 | ಇಂಗ್ಲೀಷಿನಿಂದ ಕನ್ನಡಕ್ಕೆ ಭಾಷಾಂತರ | 25 |
| ಒಟ್ಟು | | 150 |

- ಕರ್ನಾಟಕ ಸಿವಿಲ್ ಸೇವೆಯಡಿಯ ಕಿರಿಯ ಸಹಾಯಕರು/ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆ-2 ಮತ್ತು ಪತ್ರಿಕೆ-3ರ ಪಠ್ಯಕ್ರಮ ಈ ಪರೀಕ್ಷೆಯು ಕೆಳಕಂಡ ಪತ್ರಿಕೆಗಳನ್ನು ಹೊಂದಿರುತ್ತದೆ.
- ಪತ್ರಿಕೆ-2 : ಸಾಮಾನ್ಯ ಕನ್ನಡ/ಸಾಮಾನ್ಯ ಇಂಗ್ಲೀಷ್ : 100 ಅಂಕಗಳು
- ಪತ್ರಿಕೆ-3 : ಸಾಮಾನ್ಯ ಜ್ಞಾನ : 100 ಅಂಕಗಳು
- ಪ್ರತಿಯೊಂದು ಪತ್ರಿಕೆಯನ್ನು 1 ½ ಗಂಟೆ ಸಮಯದಲ್ಲಿ ಉತ್ತರಿಸಬೇಕಾಗುತ್ತದೆ.ಸಾಮಾನ್ಯ ಜ್ಞಾನ ಮತು ಸಾಮಾನ್ಯ ಕನ್ನಡ/ಸಾಮಾನ್ಯ ಇಂಗ್ಲೀಷ್ ಈ ಎರಡು ಪತ್ರಿಕೆಗಳು ವಸ್ತುನಿಷ್ಠ ಬಹು ಆಯ್ಕೆಯ(Objective Multiple Choice Type) ವಿಧಾನದ್ದಾಗಿರುವುದು.
- ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಪತ್ರಿಕೆಯು ಸಾಮಾನ್ಯವಾಗಿ ವಿಶ್ವವಿದ್ಯಾಲಯದ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣನಾಗಿರುವ ವಿದ್ಯಾರ್ಥಿಗೆ ಇರಬೇಕಾದ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು. ಇದರ ಮೂಲಕ ಅಭ್ಯರ್ಥಿಯ ಕನ್ನಡ / ಇಂಗ್ಲೀಷ್ ವ್ಯಾಕರಣ, ಶಬ್ಧ ಸಂಪತ್ತು, ಕಾಗುಣಿತ (Spelling) ಸಮನಾರ್ಥಕ ಪದಗಳು, ವಿರುದ್ಧಾರ್ಥಕ ಪದಗಳು ಇವುಗಳ ಪರಿಜ್ಞಾನ, ಇಂಗ್ಲೀಷ್ / ಕನ್ನಡ ಭಾಷೆಯನ್ನು ಅರಿಯುವ ಮತ್ತು ಗ್ರಹಿಸುವ ಅಭ್ಯರ್ಥಿಯ ಶಕ್ತಿಯ ಮತ್ತು ಅದರ ಸರಿಯಾದ ಹಾಗೂ ತಪ್ಪು ಬಳಕೆ ಇತ್ಯಾದಿಗಳನ್ನು ಪರಿಶೀಲಿಸುವ ಅಭ್ಯರ್ಥಿಯ ಸಾಮರ್ಥ್ಯ ಇವುಗಳನ್ನು ಪರೀಕ್ಷಿಸಲು ಉದ್ದೇಶಿಸಲಾಗಿದೆ.
- ಅಭ್ಯರ್ಥಿಗಳು ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಪತ್ರಿಕೆಗಳಲ್ಲಿ ಯಾವುದಾದರೂ ಒಂದನ್ನು ಆಯ್ಕೆ ಮಾಡತಕ್ಕದ್ದು. ಒಮ್ಮೆ ಆಯ್ಕೆ ಮಾಡಿದ ನಂತರ ಬದಲಾವಣೆಗೆ ಅವಕಾಶ ಇರುವುದಿಲ್ಲ.
- ಸಾಮಾನ್ಯ ಜ್ಞಾನ ಪತ್ರಿಕೆಯು ಸಾಮಾನ್ಯವಾಗಿ ವಿಶ್ವವಿದ್ಯಾನಿಲಯದ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣನಾಗಿರುವ ವಿದ್ಯಾರ್ಥಿಗೆ ಇರಬೇಕಾದ ಸಾಮಾನ್ಯ ಜ್ಞಾನಕ್ಕೆ ಸಂಬಂಧಪಟ್ಟ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು ಮತ್ತು ಇದು ಭಾರತದ ಸಂವಿಧಾನ, ಭಾರತದ ಇತಿಹಾಸ, ಮತ್ತು ಸಂಸ್ಕøತಿ, ಭಾರತದ ಸಾಮಾನ್ಯ ಹಾಗೂ ಆರ್ಥಿಕ, ಭೂಗೋಳ ಶಾಸ್ತ್ರ, ಇತ್ತೀಚಿನ ಘಟನೆಗಳು, ದೈನಿಕ ಜೀವನದಲ್ಲಿ ವಿಜ್ಞಾನ ಮತ್ತು ಒಬ್ಬ ವಿದ್ಯಾವಂತ ವ್ಯಕ್ತಿಯು ದೈನಂದಿನ ಜೀವನದಲ್ಲಿ ಗಮನಿಸಬಹುದಾದಂತಹ ವಿಷಯಗಳು. ಇವುಗಳ ಮೇಲಿನ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

## Syllabus for the competitive examination Paper-2 and Paper-3 for recruitment to the posts of Assistant/ First Division Assistants in Karnataka State Civil Services

The examination will consist of two written papers, namely,-

Paper-2: General English or General Kannada

Paper-3: General Knowledge

- The maximum marks for each paper will be 100. The questions in both the papers will be "Objective Multiple Choice Type". The duration for each paper will be 1½ hours.
- The paper on General English or General Kannada will normally conform to the minimum standard expected of a student who has passed the Bacheolor's Degree Examination of a University. It is intended to test candidate's knowledge of English/Kannada grammar, vocabulary, spelling, synonyms, antonyms, his power to understand and comprehend English/Kannada language and his ability to discriminate between correct and incorrect usage, etc.,
- The candidates may select either the paper on General English or the paper on General Kannada.

- The paper on General Knowledge will normally conform to the minimum standard relating to General Knowledge, expected of a student who has passed Bachelor's Degree Examination of a University and will cover questions on the Constitution of India, Indian History and Culture, General and Economic Geography of India, Current Events, every day science and such matters of every day observation as may be expected of an educated person.

## 8. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:-

### 8.1 ಜಾತಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು

| | |
|---|---|
| **ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು,** | ನಮೂನೆ `ಡಿ'<br>ಸದರಿ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆವಿಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011 ದಿನಾಂಕ 22-02-2012)} |
| **ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು** | ನಮೂನೆ `ಇ'<br>ಸದರಿ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆವಿಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011 ದಿನಾಂಕ 22-02-2012)} |
| **ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು** | • ನಮೂನೆ `ಎಫ್'<br>• ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು.<br>• ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರಬೇಕು.<br>• ಕೊನೆಯ ದಿನಾಂಕದ ನಂತರ ಪಡೆದ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು. |
| • ಅರ್ಜಿ ಸಲ್ಲಿಸುವ ಸಮಯದಲ್ಲಿ ತಾವು ಕೋರಲಾದ ಜಾತಿ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು, ತಪ್ಪಿದ್ದಲ್ಲಿ ಇವರ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ. ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ , ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ನಿಗದಿಪಡಿಸಿದ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು. | |
| 8.2 ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು | • ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ 13-02-2001ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. |

| | |
|---|---|
| | • ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಈ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು, ತಪ್ಪಿದ್ದಲ್ಲಿ ಇವರ ಈ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ.<br>• ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಹಾಗೂ ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.<br>• ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಸದರಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.<br>• ಜಾತಿ ಮೀಸಲಾತಿ ಕೋರಿರುವ ಗ್ರಾಮೀಣ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಸಾಮಾನ್ಯ ಅರ್ಹತೆ ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ, ನಮೂನೆ-01 (Creamy layer) ಸಲ್ಲಿಸದಿದ್ದಲ್ಲಿ, ಅಂತಹವರ ಗ್ರಾಮೀಣ ಮೀಸಲಾತಿಯ ಮೀಸಲಾಗಿತೂ ಸಹ ಅನರ್ಹರಾಗುತ್ತಾರೆ. |
| 8.3 ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು | • ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24-10-2002 ರನ್ವಯ ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು 01ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.<br>• ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಸದರಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. |
| 8.4 ಮಾಜಿ ಸೈನಿಕರಿಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು | ವಿವರಣೆ:-(1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ; ಮತ್ತು<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ |

ಸೇವೆಯಿಂದ ಬಿಡುಗಡೆ  ಹೊಂದಿದ ವ್ಯಕ್ತಿ

ಅಥವಾ

(ಈ)  ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ  ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ಧಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

- ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
- ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
- ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು
- ಈ ಮೇಲ್ಕಂಡ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ.

ವಿವರಣೆ :- ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ  ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ  ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ.  ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

(2)  ಸೈನಿಕರು ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ  ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

- ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು(ಗುರುತಿನ ಚೀಟಿ, ನಿವೃತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) / ಸೈನಿಕರು ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ  ಮಡಿದ ಅಥವಾ ಅಂಗ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು  ಸೈನಿಕರು ಮಡಿದ / ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು  ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಈ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ  ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು, ತಪ್ಪಿದ್ದಲ್ಲಿ ಇವರ ಈ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ.  ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ / ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರ.
- ನಿಯಮಗಳನ್ವಯ ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ

| | |
|---|---|
| | ಪತ್ರವನ್ನು ಪಡೆದು ಅದರ ದಿನಾಂಕವನ್ನು ಅರ್ಜಿಯಲ್ಲಿ ನಮೂದಿಸಿ ಅರ್ಜಿಯೊಂದಿಗೆ ಅಪ್ಲೋಡ್ ಮಾಡತಕ್ಕದ್ದು, ಹಾಗೂ ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಇದೇ ನಿರಾಕ್ಷೇಪಣಾ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. |
| 8.5ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ(PDP) ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು | • ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 23 ಸೇನೆನಿ 99 ದಿನಾಂಕ 23-11-2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಈ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು. |
| 8.6 ಅಂಗವಿಕಲ ಅಭ್ಯರ್ಥಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಮತ್ತು ಅದಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರಗಳು ಹಾಗೂ ಅದರ ನಿಯಮಗಳು | • ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03-09-2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು ಮತ್ತು ಸಮೂಹ `ಸಿ' ಗುಂಪಿನ ಹುದ್ದೆಗಳಿಗೆ ಶೇಕಡ 5 ರಷ್ಟು ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ 19-11-2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.<br>• ನಿಗದಿಪಡಿಸಿದ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.<br>• ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 74 ಸೇನೆನಿ 2006 ದಿನಾಂಕ 30-10-2007 ರಲ್ಲಿ ನಿಗದಿಪಡಿಸಿದಂತೆ ಅಂಧ/ದೃಷ್ಟಿ ಮಾಂದ್ಯ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯು ಆಯೋಗವು ಪರೀಕ್ಷಾ ಪೂರ್ವ ಅಥವಾ ನಂತರದಲ್ಲಿ ನಡೆಸುವ ವೈದ್ಯಕೀಯ ಪರೀಕ್ಷೆಯ ವರದಿಗೆ ಬದ್ಧವಾಗಿದೆ. |
